# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ಶಿರಗುಪ್ಪಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಜಗನ್ನಾಥ ಕೆ.ಕಲವಾಡ ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಎ.ಆರ್.ಎಲ್.ಓ.-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/8048/2015/ARLO-1, ದಿನಾಂಕ:18.10.2016

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಎ.ಆರ್.ಎಲ್.ಓ.-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು-1 ರವರು ದಿನಾಂಕ: 05.10.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಸಿದ್ಧರಾಮ ಬಸವಣ್ಣೆಪ್ಪ ತೆಂಗಿನಕಾಯಿ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ಶಿರಗುಪ್ಪಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಜಗನ್ನಾಥ ಕೆ.ಕಲವಾಡ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕೆಳಕಂಡ ಅಂಶಗಳು ಕಂಡುಬಂದಿರುವುದಾಗಿ ಕೆಳಗಿನಂತೆ ವರದಿ ಮಾಡಲಾಗಿದೆ.

"ದುರುದಾರರು ತಮ್ಮ ಆಸ್ತಿಯ ಸರ್ವೆ ನಂ.192 ಮತ್ತು 321 ರ ದಾಖಲೆಗಳನ್ನು ಕೋರಿ ದಿನಾಂಕ 20.5.2014 ರಂದು ಅರ್ಜಿ ಸಲ್ಲಿಸಿರುವುದು ಕಂಡುಬಂದಿದೆ. ಆದರೆ, ಎದುರುದಾರರು ದೂರುದಾರರು ಕೋರಿರುವ ದಾಖಲೆಗಳನ್ನು ನೀಡಿರುವುದಾಗಿ ತಿಳಿಸಿರುತ್ತಾರೆ. ಆದರೆ, ಯಾವ ದಿನಾಂಕದಂದು? ದೂರುದಾರರು ಕೋರಿರುವ ದಾಖಲೆಗಳನ್ನು ನೀಡಲಾಗಿದೆ ಎಂಬ ಬಗ್ಗೆ ದಿನಾಂಕವನ್ನು ನಮೂದಿಸಿಲ್ಲ ಮತ್ತು ದೂರುದಾರರು ದಾಖಲೆ ಪಡೆದಿರುವ ಬಗ್ಗೆ ಅವರ ಸಹಿ ಪಡೆದಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ. ಕಾರಣ, ದೂರುದಾರರು ದಾಖಲೆ ಕೋರಿ ಸಲ್ಲಿಸಲಾದ ಅರ್ಜಿಯ ಬಗ್ಗೆ ಎದುರುದಾರರು ದಾಖಲೆಗಳನ್ನು ಪೂರೈಸದೇ ವಿನಾಕಾರಣ, ತೊಂದರೆ ನೀಡಿ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ."

ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರ ಅನ್ವಯ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ಶ್ರೀ ಜಗನ್ನಾಥ ಕೆ.ಕಲವಾಡ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶಿರಗುಪ್ಪಿ ಗ್ರಾಮ ಪಂಚಾಯತಿ ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 731 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 07.11.2016**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಗನ್ನಾಥ ಕೆ.ಕಲವಾಡ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶಿರಗುಪ್ಪಿ ಗ್ರಾಮ ಪಂಚಾಯತಿ ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ–1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು ಎ.ಆರ್.ಎಲ್.ಓ.–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
(ಮೇಲೆ ಓದಲಾದ ಪತ್ರದೊಂದಿಗೆ ಸಲ್ಲಿಸಲಾಗಿದ್ದ ಮೂಲ ಲಗತ್ತುಗಳು ಹಾಗೂ ಉಪಲೋಕಾಯುಕ್ತ ವರದಿಯನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ.)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಧಾರವಾಡ ಜಿಲ್ಲಾ ಪಂಚಾಯತಿ, ಧಾರವಾಡ.
5) ಕಾರ್ಯನಿರ್ವಾಹಕ ಅಧಿಕಾರಿ, ಹುಬ್ಬಳ್ಳಿ ತಾಲ್ಲೂಕು ಪಂಚಾಯತಿ, ಹುಬ್ಬಳ್ಳಿ, ಧಾರವಾಡ ಜಿಲ್ಲೆ.
(ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಜಗನ್ನಾಥ ಕೆ.ಕಲವಾಡ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶಿರಗುಪ್ಪಿ ಗ್ರಾಮ ಪಂಚಾಯತಿ ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.